ಕರ್ನಾಟಕ ಸರ್ಕಾರ
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ

ಸಂಖ್ಯೆ:ಬಿಟಿಇ/6/ಇಸಿಎಸ್(1)/2023

ಆಯುಕ್ತರವರ ಕಛೇರಿ
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ
ಅರಮನೆ ರಸ್ತೆ, ಬೆಂಗಳೂರು-560001
ದಿನಾಂಕ:29.11.2023

## ಸುತ್ತೋಲೆ

ವಿಷಯ: ಡಿಸೆಂಬರ್ 2023 ರ ಡಿಪ್ಲೋಮ ಸೆಮಿಸ್ಟರ್ ಪ್ರಾಯೋಗಿಕ ಹಾಗೂ ಥಿಯರಿ ಪರೀಕ್ಷೆಗಳನ್ನು ಮುಂದೂಡುವ ಕುರಿತು.

ಉಲ್ಲೇಖ: 1.ಈ ಕಛೇರಿ ಸುತ್ತೋಲೆ ಸಂಖ್ಯೆ: ಬಿಟಿಇ/6/ಇಸಿಎಸ್(1)/2023 ದಿನಾಂಕ:26.10.2023
2. ಸರ್ಕಾರದ ಪತ್ರ ಸಂಖ್ಯೆ: ಇಡಿ 150/ಡಿಟಿಇ/2023 ದಿನಾಂಕ:24.11.2023
3. ಈ ಕಛೇರಿ ಜ್ಞಾಪನ ಸಂಖ್ಯೆ: ಬಿಟಿಇ/05/ಇಎಪಿ/2023 ದಿನಾಂಕ:27.11.2023

***********

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಉಲ್ಲೇಖ (1) ರ ಈ ಕಛೇರಿ ಸುತ್ತೋಲೆಯಲ್ಲಿ C-20 ಪಠ್ಯಕ್ರಮದ ಪ್ರಾಯೋಗಿಕ ಪರೀಕ್ಷೆಗಳು ದಿನಾಂಕ:02.12.2023 ರಿಂದ 15.12.2023 ರವರೆಗೆ ಮತ್ತು C-20 ಪಠ್ಯಕ್ರಮದ ಥಿಯರಿ ಪರೀಕ್ಷೆ (SEE) ಗಳನ್ನು ದಿನಾಂಕ:18.12.2023ರಿಂದ 04.01.2024 ರವರೆಗೆ ಹಾಗೂ ಹಳೆ ಪಠ್ಯಕ್ರಮಗಳ (ಉದಾ:C-15) ಥಿಯರಿ ಪರೀಕ್ಷೆಗಳನ್ನು ಪ್ರಾಯೋಗಿಕ ಪರೀಕ್ಷೆಗಳು ನಡೆಯುವ ಅವಧಿಯಲ್ಲಿ ಜರುಗಿಸಲಾಗುವುದು ಎಂದು ತಿಳಿಸಲಾಗಿತ್ತು.

ಮುಂದುವರೆದು ಉಲ್ಲೇಖ (2)ರ ಸರ್ಕಾರದ ಪತ್ರದಲ್ಲಿ C-09 & C-15 ಪಠ್ಯಕ್ರಮಗಳಲ್ಲಿ ಪ್ರಥಮ/ ದ್ವಿತೀಯ ವರ್ಷಕ್ಕೆ ಪ್ರವೇಶ ಪಡೆದು ಶೈಕ್ಷಣಿಕ ಅವಧಿ ಮುಗಿದಿರುವ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ 2023-24ನೇ ಶೈಕ್ಷಣಿಕ ಸಾಲಿನ 2023ರ ಡಿಸೆಂಬರ್ ಸೆಮಿಸ್ಟರ್ ಪರೀಕ್ಷೆಗೆ ಹಾಜರಾಗಲು ಸರ್ಕಾರವು ಅನುಮತಿ ನೀಡಿದ್ದು, ಉಲ್ಲೇಖ (3) ರ ಈ ಕಛೇರಿ ಸುತ್ತೋಲೆಯಲ್ಲಿ ಸದರಿ ಶೈಕ್ಷಣಿಕ ಸಾಲಿನ ವಿದ್ಯಾರ್ಥಿಗಳಿಗೆ ಅನ್ವಯಿಸುವಂತೆ 2023 ರ ಡಿಸೆಂಬರ್ ಸೆಮಿಸ್ಟರ್ ಪರೀಕ್ಷೆಗೆ ದಿನಾಂಕ:02.12.2023 ರವರೆಗೆ ದಂಡ ರಹಿತವಾಗಿ ಪರೀಕ್ಷಾ ಶುಲ್ಕ ಪಾವತಿಸಿ ಪರೀಕ್ಷೆಗೆ ನೋಂದಾಯಿಸಿಕೊಳ್ಳಲು ಅವಕಾಶ ನೀಡಲಾಗಿದೆ. ಅಂತಹ ವಿದ್ಯಾರ್ಥಿಗಳಿಗೆ ಸಂಬಂಧಿಸಿದ ಕ್ಯಾಂಡಿಡೇಟ್ ಲಿಸ್ಟ್ ಅನ್ನು ಆಗಿಂದಾಗ್ಗೆ ಇಂದೀಕರಿಸಲು ಸೂಚಿಸಲಾಗಿದೆ.

ಪ್ರಯುಕ್ತ ಆಡಳಿತಾತ್ಮಕ ಹಿತದೃಷ್ಟಿಯಿಂದ **ಡಿಸೆಂಬರ್ 2023 ರ ಪ್ರಾಯೋಗಿಕ & ಥಿಯರಿ ಪರೀಕ್ಷೆಗಳನ್ನು (C-03, C-09 & C-15 ಮತ್ತು C-20 ಪಠ್ಯಕ್ರಮಗಳ) ಮುಂದೂಡಲಾಗಿದ್ದು, ಪರಿಷ್ಕೃತ ಪರೀಕ್ಷಾ ದಿನಾಂಕಗಳನ್ನು ಮತ್ತು ವೇಳಾಪಟ್ಟಿಯನ್ನು ಮುಂದಿನ ದಿನಗಳಲ್ಲಿ ಪ್ರಕಟಿಸಲಾಗುವುದು.** ಆಂತರಿಕ ಅಂಕಗಳ ಪರಿವೀಕ್ಷಕರುಗಳು & ಪ್ರಾಯೋಗಿಕ ಪರೀಕ್ಷೆಗಳ ಮುಖ್ಯ ಅಧೀಕ್ಷಕರುಗಳ ನೇಮಕಾತಿಯ ಮಾಹಿತಿಯು ಬಿಟಿಇಲಿಂಕ್ಸ್ ವೆಬ್ ಪೋರ್ಟಲ್ ನಲ್ಲಿ ಲಭ್ಯವಿದ್ದು ಅಗತ್ಯ ಕ್ರಮವಹಿಸುವುದು.

ಸದರಿ ವಿಷಯವನ್ನು ಎಲ್ಲಾ ಉಪನ್ಯಾಸಕರು/ ವಿದ್ಯಾರ್ಥಿಗಳು/ಪೋಷಕರ ಗಮನಕ್ಕೆ ತಪ್ಪದೇ ತರುವಂತೆ ರಾಜ್ಯದ ಎಲ್ಲಾ ಪಾಲಿಟೆಕ್ನಿಕ್ ಗಳ ಪ್ರಿನ್ಸಿಪಾಲರುಗಳಿಗೆ ಸೂಚಿಸಲಾಗಿದೆ.

ಕಾರ್ಯದರ್ಶಿ

ಇವರಿಗೆ,
ರಾಜ್ಯದ ಎಲ್ಲಾ ಸರ್ಕಾರಿ/ಅನುದಾನಿತ/ಖಾಸಗಿ ಪಾಲಿಟೆಕ್ನಿಕ್ ಗಳ ಪ್ರಿನ್ಸಿಪಾಲರು/ ಮುಖ್ಯ ಅಧೀಕ್ಷಕರುಗಳಿಗೆ- ಮಾಹಿತಿ ಮತ್ತು ಅಗತ್ಯ ಕ್ರಮಕ್ಕಾಗಿ

ಪ್ರತಿ: 1. ಶ್ರೀ ಹರೀಶ ಶೆಟ್ಟಿ, ಪ್ರಾಂಶುಪಾಲರು, ಕರ್ನಾಟಕ ಸರ್ಕಾರಿ ಪಾಲಿಟೆಕ್ನಿಕ್, ಮಂಗಳೂರು- ಮಾಹಿತಿ & ಅಗತ್ಯ ಪೂರ್ವಸಿದ್ಧತೆಗಾಗಿ
2.ಇ-ಗವರ್ನೆನ್ಸ್ ವಿಭಾಗ – ವೆಬ್ ಸೈಟ್ ನಲ್ಲಿ ಪ್ರಕಟಿಸಲು
3. ಗಣಕ ಕೇಂದ್ರ – ಬಿಟಿಇಲಿಂಕ್ಸ್ ವೆಬ್ ಪೋರ್ಟಲ್ ನಲ್ಲಿ ಪ್ರಕಟಿಸಲು ಮತ್ತು ಅಗತ್ಯಕ್ರಮಕ್ಕಾಗಿ
4. ಆಯುಕ್ತರ ಆಪ್ತಶಾಖೆ -ಅವಗಾಹನೆಗಾಗಿ
5. ನಿರ್ದೇಶಕರ ಆಪ್ತಶಾಖೆ -ಅವಗಾಹನೆಗಾಗಿ
6.ಇಎಪಿ ವಿಭಾಗ -ಮಾಹಿತಿಗಾಗಿ